ಆ) ಈ ಕಾಲೇಜುಗಳಲ್ಲಿ ದೂರದ ಗ್ರಾಮಗಳಿಂದ ಬಡ ವಿದ್ಯಾರ್ಥಿಗಳು ಮುಂದಿನ ವ್ಯಾಸಂಗಕ್ಕೆ ಸುಮಾರು 30 ಕಿ ಮೀ ಅಂತರದಿಂದ ಆಗಮಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ

ಇ) 30 ಕಿ ಮೀ. ಅಂತರದ ಹತ್ತಿರದಲ್ಲಿ ಹೊಸದಾಗಿ ಒಂದು ಪದವಿ ಪೂರ್ವ ಕಾಲೇಜನ್ನು ತೆರೆದು ಈ ಭಾಗದ ವಿದ್ಯಾರ್ಥಿಗಳಿಗೆ ಅನುಕೂಲ ಮಾಡಬಹುದೆ

ಈ) ಬಾಗೇಪಲ್ಲಿ ತಾಲ್ಲೂಕಿನ ಪಾತಪಾಳ್ಯ ಮತ್ತು ಗುಡಿಬಂಡೆ ತಾಲ್ಲೂಕಿನ ಸೋಮೇನಹಳ್ಳಿಯಲ್ಲಿ ಕಾಲೇಜುಗಳು ಇಲ್ಲದೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ

ಉ) ಈ ಭಾಗದಲ್ಲಿ ಕಾಲೇಜುಗಳನ್ನು ಸ್ಥಾಪನೆಮಾಡಿ ವಿದ್ಯಾರ್ಥಿಗಳಿಗೆ ಅನುಕೂಲ ಮಾಡಿಕೊಡುವುದು ಯಾವಾಗ?

ಪ್ರೋ॥ ಬಿ ಕೆ ಚಂದ್ರಶೇಖರ್ (ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ರಾಜ್ಯ ಸಚಿವರು)

ಅ) ಒಟ್ಟು 05 ಪದವಿ ಪೂರ್ವ ಕಾಲೇಜುಗಳಿವೆ

ಆ) ಹೌದು

ಇ) ಖಾಸಗಿ ಸಂಸ್ಥೆಗಳು ಮುಂದೆ ಬಂದಲ್ಲಿ ಹೆಚ್ಚಿನ ಆದ್ಯತೆ ನೀಡಿ ಕಾಲೇಜು ಮಂಜೂರಾತಿ ಬಗ್ಗೆ ಪರಿಶೀಲಿಸಲಾಗುವುದು

ಈ) ಹೌದು

ಉ) ಇದು ರಾಜ್ಯದ ಹಣಕಾಸು ಪರಿಸ್ಥಿತಿಯನ್ನು ಅವಲಂಬಿಸಿರುತ್ತದೆ ಖಚಿತವಾಗಿ ಹೇಳಲು ಬರುವುದಿಲ್ಲ

ತಿಪಟೂರು ನಗರದ ಸಾರ್ವಜನಿಕ ಆಸ್ಪತ್ರೆಗಳನ್ನು ಮೇಲ್ದರ್ಜೆಗೇರಿಸುವುದು

182 (128) ಶ್ರೀ ಷಡಾಕ್ಷರ ಕೆ (ತಿಪಟೂರು) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ?

ಅ) ತಿಪಟೂರು ನಗರದಲ್ಲಿ ಹಾಲಿ 100 ಹಾಸಿಗೆಗಳುಳ್ಳ ಸಾರ್ವಜನಿಕ ಆಸ್ಪತ್ರೆಯನ್ನು 150 ಹಾಸಿಗೆಗೆ ಮೇಲ್ದರ್ಜೆಗೇರಿಸಲು ಪ್ರಸ್ತಾವನೆ ಸರ್ಕಾರದ ಮುಂದೆ ಇದೆಯೇ

ಆ) ಹಾಗಿದ್ದಲ್ಲಿ ಯಾವಾಗ ಮೇಲ್ದರ್ಜೆಗೇರಿಸಲಾಗುವುದು?

ಶ್ರೀ ಕಾಗೋಡು ತಿಮ್ಮಪ್ಪ (ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು)

ಅ) ಇಲ್ಲ

ಆ) ಅನ್ವಯಿಸುವುದಿಲ್ಲ

ಮೈಸೂರು ನಗರದ ಒಂಟಿಕೊಪ್ಪಲ್‌ನಲ್ಲಿ ಹೊಸ ಸರ್ಕಾರಿ ಪ್ರೌಢಶಾಲೆ ಮಂಜೂರಾತಿ

184 (323) ಶ್ರೀ ಹೆಚ್ ಎಸ್ ಶಂಕರಲಿಂಗೇಗೌಡ (ಚಾಮರಾಜ) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ರಾಜ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ?

ಅ) ಮೈಸೂರು ನಗರದ ಒಂಟಿಕೊಪ್ಪಲಿನಲ್ಲಿ ಹೊಸದಾಗಿ ಸರ್ಕಾರಿ ಪ್ರೌಢಶಾಲೆ ತೆರೆಯಬೇಕೆಂದು ಹಲವಾರು ಮನವಿಗಳಿಗೆ ಸರ್ಕಾರ ಯಾವ ಕ್ರಮ ಕೈಗೊಂಡಿದೆ

ಆ) ಬರುವ ಶೈಕ್ಷಣಿಕ ವರ್ಷದಿಂದ ಅಲ್ಲಿ ಹೊಸದಾಗಿ ಸರ್ಕಾರಿ ಪ್ರೌಢಶಾಲೆ ಪ್ರಾರಂಭಿಸಲು ಸರ್ಕಾರದ ನಿಲುವೇನು?

ಪ್ರೋ॥ ಬಿ ಕೆ ಚಂದ್ರಶೇಖರ್ (ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ರಾಜ್ಯ ಸಚಿವರು)

ಅ) ಪ್ರಸ್ತಾವನೆ ಬಂದಿರುವುದಿಲ್ಲ

ಆ) ಉದ್ಭವಿಸುವುದಿಲ್ಲ